Computers

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : 92 (627) |
| ಸದಸ್ಯರ ಹೆಸರು | : ಶ್ರೀ ಹೆಚ್.ಎಂ.ರಮೇಶ್ ಗೌಡ |
| ಉತ್ತರಿಸಬೇಕಾದ ದಿನಾಂಕ | : 04.03.2021 |
| ಉತ್ತರಿಸುವ ಸಚಿವರು | : ಗೃಹ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ನಗರದಲ್ಲಿ ದಿನೇ ದಿನೇ ಟ್ರಾಫಿಕ್ ತೊಂದರೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಟ್ರಾಫಿಕ್ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; | ಹೌದು.<br>ಟ್ರಾಫಿಕ್ ನಿಯಂತ್ರಣಕ್ಕೆ ಕೈಗೊಳ್ಳಲಾಗಿರುವ ಕ್ರಮಗಳ ವಿವರಗಳನ್ನು **ಅನುಬಂಧ-1**ರಲ್ಲಿ ನೀಡಲಾಗಿದೆ. |
| ಆ) | ಸದ್ಯ ಟ್ರಾಫಿಕ್ ವಿಭಾಗದಲ್ಲಿ ಮೂರು ವಲಯಗಳು ಮಾತ್ರವಿದ್ದು, ಹೊಸದಾಗಿ ನಾಲ್ಕನೇ ವಲಯ (ದಕ್ಷಿಣ ವಲಯ) ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ; | ಬೆಂಗಳೂರು ನಗರ ಸಂಚಾರ ವಿಭಾಗದಲ್ಲಿ ಹೊಸದಾಗಿ ನಾಲ್ಕನೇ ವಲಯ (ದಕ್ಷಿಣ ವಲಯ) ಸ್ಥಾಪಿಸುವ ಬಗ್ಗೆ ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| ಇ) | ನಗರದ ಅನಿರೀಕ್ಷಿತ ತಿರುವುಗಳಲ್ಲಿ ಟ್ರಾಫಿಕ್ ಪೊಲೀಸರು ಏಕಾಏಕಿ ಅಡ್ಡ ಬಂದು ವಾಹನ ಸವಾರರ ಅಪಘಾತಗಳಿಗೆ ಕಾರಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು; | ಬಂದಿರುವುದಿಲ್ಲ.<br>ಸಂಚಾರ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ ಪ್ರಕರಣಗಳನ್ನು ದಾಖಲಿಸುವ ಸಂದರ್ಭದಲ್ಲಿ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು ಅನುಸರಿಸಬೇಕಾದ ಕ್ರಮಗಳ ಬಗ್ಗೆ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ವಿವರಗಳನ್ನು **ಅನುಬಂಧ-2**ರಲ್ಲಿ ನೀಡಲಾಗಿದೆ. |
| ಈ) | ಟ್ರಾಫಿಕ್ ವಿಭಾಗದ ಸಿಬ್ಬಂದಿಗಳ ಸಂಖ್ಯೆ ಕಡಿಮೆಯಿದ್ದು, ಸಿಬ್ಬಂದಿಗಳ ನಿಯೋಜನೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ; ಹೊಸ ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆ ಯಾವಾಗ ಆರಂಭವಾಗಲಿದೆ? | ಸಂಚಾರ ವಿಭಾಗದಲ್ಲಿ ಸಿಬ್ಬಂದಿಯ ಕೊರತೆ ಇದ್ದುದರಿಂದ ಗೃಹ ರಕ್ಷಕ ದಳದ ಸಿಬ್ಬಂದಿಯನ್ನು ಸಂಚಾರ ನಿಯಂತ್ರಣ ಮತ್ತು ನಿರ್ವಹಣೆಗೆ ಬಳಸಿಕೊಳ್ಳಲಾಗುತ್ತಿದೆ.<br>ಬೆಂಗಳೂರು ನಗರದಲ್ಲಿ ಸಂಚಾರ ವಾರ್ಡನ್ ಸಂಸ್ಥೆ ಇದ್ದು, ಸಂಚಾರ ವಾರ್ಡನ್‌ಗಳನ್ನು ಸಹ ಸಂಚಾರ ನಿಯಂತ್ರಣಕ್ಕಾಗಿ ಬಳಸಿಕೊಳ್ಳಲಾಗುತ್ತಿದೆ.<br>ಹೊಸದಾಗಿ ಪಿ.ಎಸ್.ಐ. ಹುದ್ದೆಗಳಿಗೆ ಮತ್ತು ಪಿ.ಸಿ. ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯು ಈಗಾಗಲೇ ಪ್ರಾರಂಭವಾಗಿದ್ದು, ಪ್ರಗತಿಯಲ್ಲಿರುತ್ತದೆ. |

**ಹೆಚ್‌ಡಿ 156 ಎಸ್‌ಎಸ್‌ಟಿ 2021**

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು

ಆಂದೋಲನಗಳನ್ನು ಹಾಗೂ ವೃತ್ತಿಪರ ಚಾಲಕರುಗಳಿಗೆ ಹಲವಾರು ತರಬೇತಿ ಹಾಗೂ ರಸ್ತೆ ಸುರಕ್ಷತೆಯ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸುತ್ತಿದ್ದು ರಸ್ತೆ ಸುರಕ್ಷತೆಯನ್ನು ಅತ್ಯುತ್ತಮ ರೀತಿಯಲ್ಲಿ ಜಾರಿ ಮಾಡಲಾಗಿದೆ.

11. ಪೀಕ್‌ಅವರ್ಸ್‌ಗಳಲ್ಲಿ ಸಂಚಾರ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರುಗಳು ಸಂಚಾರ ನಿರ್ವಹಣೆಯಲ್ಲಿ ತೊಡಗಿಕೊಂಡಿರುವ ಕಾರಣ ಅಂತಹ ಸಂದರ್ಭದಲ್ಲಿ ಕಣ್ಗಾವಲು, ಎನ್‌ಫೋರ್ಸ್‌ಮೆಂಟ್ ಹಾಗೂ ಡಿಜಿಟಲ್ ಕ್ಯಾಮರಾಗಳ ಮೂಲಕ ಉಲ್ಲಂಘನೆ ಎಸಗುವ ವಾಹನಗಳ ಛಾಯಾಚಿತ್ರವನ್ನು ಸೆರೆಹಿಡಿದು ಅವರುಗಳ ವಿರುದ್ಧ ಐ.ಎಂ.ವಿ. 133 ನೋಟೀಸ್‌ಗಳನ್ನು ಕಳುಹಿಸಿ ದಂಡ ಪಾವತಿಸಿಕೊಳ್ಳಲಾಗುತ್ತಿದೆ.

12. ನಗರದ ರಸ್ತೆಗಳಲ್ಲಿ ಸಂಚಾರ ಸಮಸ್ಯೆಗಳಿಗೆ ಪ್ರಮುಖ ಕಾರಣವಾಗಿರುವ ವಾಹನಗಳ ಅನಧಿಕೃತ, ತಪ್ಪು ನಿಲುಗಡೆ ಹಾಗೂ ಫುಟ್‌ಪಾತ್ ಮೇಲೆ ವಾಹನ ನಿಲುಗಡೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗಿದೆ. 2019ನೇ ಸಾಲಿನಲ್ಲಿ 11,65,199 ಪ್ರಕರಣಗಳನ್ನು, 2020ನೇ ಸಾಲಿನಲ್ಲಿ 7,28,239 ಹಾಗೂ ಪ್ರಸಕ್ತ 2021ನೇ ಸಾಲಿನ ಜನವರಿ ಮಾಹೆಯ ಅಂತ್ಯದವರೆಗೆ ಒಟ್ಟು 91350 ತಪ್ಪು ನಿಲುಗಡೆ ಪ್ರಕರಣಗಳನ್ನು ಹಾಗೂ 2019ನೇ ಸಾಲಿನಲ್ಲಿ 42567, 2020ನೇ ಸಾಲಿನಲ್ಲಿ 9576 ಹಾಗೂ 2021ನೇ ಸಾಲಿನ ಜನವರಿ ಅಂತ್ಯದವರೆಗೆ 8305 ಫುಟ್‌ಪಾತ್ ನಿಲುಗಡೆ ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ.

13. ಬೆಂಗಳೂರು ನಗರದಾದ್ಯಂತ ಸಮಾನ ವೇಗಮಿತಿಯನ್ನು ಜಾರಿಗೊಳಿಸಲಾಗಿದ್ದು ಅತಿ ವೇಗವಾಗಿ ಚಲಿಸುವವರ ವಿರುದ್ಧವೂ ಸಹ ಕಟ್ಟುನಿಟ್ಟಿನ ಕ್ರಮಗಳನ್ನು ಜರುಗಿಸಲಾಗಿದೆ. ಬೆಂಗಳೂರು ನಗರ ಸಂಚಾರ ವಿಭಾಗದಲ್ಲಿ ಒಟ್ಟು 13 ಇಂಟರ್‌ಸೆಪ್ಟರ್ ವಾಹನಗಳು ಕಾರ್ಯ ನಿರ್ವಹಿಸುತ್ತಿವೆ. 2019ನೇ ಸಾಲಿನಲ್ಲಿ 61531 ಪ್ರಕರಣಗಳನ್ನು, 2020ನೇ ಸಾಲಿನಲ್ಲಿ 53638 ಹಾಗೂ ಪ್ರಸಕ್ತ 2021ನೇ ಸಾಲಿನ ಜನವರಿ ಮಾಹೆಯ ಅಂತ್ಯದವರೆಗೆ ಒಟ್ಟು 4779 ಪ್ರಕರಣಗಳನ್ನು ದಾಖಲಿಸಿ ದಂಡವನ್ನು ಸಂಗ್ರಹಿಸಲಾಗಿದೆ.

14. ಇದೇ ರೀತಿ ಅಡ್ಡಾ ದಿಡ್ಡಿಯಾಗಿ ವಾಹನ ಚಾಲನೆ ಮಾಡುವವರ ವಿರುದ್ಧ ಅಪಾಯಕಾರಿ ಚಾಲನೆ (Dangerous Driving) ಪ್ರಕರಣಗಳನ್ನು ದಾಖಲಿಸುತ್ತಿದೆ. 2019ನೇ ಸಾಲಿನಲ್ಲಿ 52038 ಪ್ರಕರಣಗಳನ್ನು, 2020ನೇ ಸಾಲಿನಲ್ಲಿ 12388 ಹಾಗೂ ಪ್ರಸಕ್ತ 2021ನೇ ಸಾಲಿನ ಜನವರಿ ಮಾಹೆಯ ಅಂತ್ಯದವರೆಗೆ ಒಟ್ಟು 706 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

15. ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರನ್ನು ಪತ್ತೆ ಮಾಡಲು ಅತ್ಯಾಧುನಿಕ ಆಲ್ಕೋಮೀಟರ್‌ಗಳನ್ನು ಖರೀದಿಸಲಾಗಿದ್ದು, ಅವುಗಳ ಮೂಲಕ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುತ್ತಿರುವವರನ್ನು ಪತ್ತೆ ಮಾಡಲಾಗುತ್ತಿದೆ. ಬೆಂಗಳೂರು ನಗರ ಸಂಚಾರ ಪೊಲೀಸ್ ವಿಭಾಗವು ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಂಡಿರುತ್ತದೆ. ಬೆಂಗಳೂರು ನಗರದ ರಸ್ತೆಗಳಲ್ಲಿ 2019ನೇ ಸಾಲಿನಲ್ಲಿ 40602 ಪ್ರಕರಣಗಳನ್ನು ಹಾಗೂ 2020ನೇ ಸಾಲಿನಲ್ಲಿ 5343 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

16. ಬೆಂಗಳೂರು ನಗರ ರಸ್ತೆಗಳಲ್ಲಿ ಪಥ ಶಿಸ್ತು ನಿಯಮಗಳನ್ನು ಉಲ್ಲಂಘಿಸುವ ವಾಹನ ಚಾಲಕರುಗಳಿಗೆ ಕಠಿಣ ನಿಯಮಗಳ ಜಾರಿಯ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. 2019ನೇ ಸಾಲಿನಲ್ಲಿ 1,84,766 ಪ್ರಕರಣಗಳನ್ನು, 2020ನೇ ಸಾಲಿನಲ್ಲಿ 61,829 ಹಾಗೂ ಪ್ರಸಕ್ತ 2021ನೇ ಸಾಲಿನ ಜನವರಿ ಮಾಹೆಯ ಅಂತ್ಯದವರೆಗೆ ಒಟ್ಟು 3374 ಪ್ರಕರಣಗಳನ್ನು ದಾಖಲಿಸಲಾಗಿದೆ.

17. ಡ್ರ್ಯಾಗ್ ರೇಸಿಂಗ್ ಮತ್ತು ವೀಲಿಂಗ್ ಮತ್ತು ಅಡ್ಡಾದಿಡ್ಡಿ ವಾಹನ ಚಾಲನೆ ಮಾಡುವುದನ್ನು ತಡೆಯಲು ಶಾಲಾ ಕಾಲೇಜು, ವಾಣಿಜ್ಯ ಮಳಿಗೆ ಹಾಗೂ ಪ್ರಮುಖ ಸ್ಥಳಗಳಲ್ಲಿ ಕೋಬ್ರಾ ಹಾಗೂ ಸಂಚಾರ ಪೊಲೀಸರ ಗಸ್ತುಗಳನ್ನು ಏರ್ಪಡಿಸಲಾಗಿದೆ. ವೀಲಿಂಗ್/ಡ್ರ್ಯಾಗ್ ರೇಸ್‌ನಲ್ಲಿ ತೊಡಗಿಸಿಕೊಂಡಿರುವವರ ವಿರುದ್ಧ ಐ.ಪಿ.ಸಿ. ಹಾಗೂ ಐ.ಎಂ.ವಿ. ಕಾಯ್ದೆಯಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತಿರುತ್ತದೆ.

18. ಸಂಚಾರ ನಿರ್ವಹಣಾ ಕೇಂದ್ರವು (ಟಿ.ಎಂ.ಸಿ) ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಬೆಂಗಳೂರು ನಗರದಾದ್ಯಂತ ಅಳವಡಿಸಲಾಗಿರುವ ಕಣ್ಗಾವಲು ಕ್ಯಾಮರಾದ ಮೂಲಕ ಟಿ.ಎಂ.ಸಿ. ಯಲ್ಲಿ

